ನಗರ ಡಿವಿಜ್ಯ ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟ್‌ನಲ್ಲಿ.

1890ನೇ ಇಸವಿ ಸಿವಿಲ್ ಮಿಸಲೇನಿಯಸ್ ನಂಬರ್ 45.

ಮೃತಪಟ್ಟ ಸೂರಪ್ಪ ಬಿ॥ ಚಿಕ್ಕ ವೆಂಕಟರಮಣಯ್ಯನ ಆಸ್ತೀ ವಿಷಯದಲ್ಲಿ —

ಅರ್ಜೀದಾರ ತಿಮ್ಮಪ್ಪನು, ಮೃತಪಟ್ಟ ಸದರೀ ಸೂರಪ್ಪನಿಗೆ ಅವಿಭಕ್ತ ಸಹೋದರರು ಅಂದರೆ ಖಾಸಾ ತಮ್ಮನು ಆಗಬೇಕೆಂಬ ಹಕ್ಕುದಾರೀ ಮೇಲೆ ಕಡೂರು ತಾಲ್ಲೂಕು ಯಗಟಿ ಸ್ಥಳದ ತಿಮ್ಮಪ್ಪನು ಯಗಟಿ ವಾಸಸ್ಥನಾಗಿ ಮೃತಪಟ್ಟ ಈರಪ್ಪನ ಜೆಂದಗಿ ಬಗ್ಯಾಗಿ ಬರತಕ್ಕ 900 ರೂಪಾಯಿ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ತಿಮ್ಮಪ್ಪನ ಅರ್ಜಿಯನ್ನು 1890ನೇ ಇಸವಿ ಆಗಸ್ಟ್ ತಿಂಗಳು ತಾರೀಖು 6ರಲ್ಲು ಕೇಸ್ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸೂರಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1890ನೇ ಇಸವಿ ಅರ್ಜೀ ನಂಬರ್ 46.

ಮೃತಪಟ್ಟ ಮಾಜಿ ಅಮೃತಮಹಲ್ ದರೋಗ ಗವುಸ್‌ಸಾಬರ ಆಸ್ತೀ ವಿಷಯದಲ್ಲಿ —

ಅರ್ಜೀದಾರ 1ನೇ ಜಮಾಲುದ್ದಿಸಾಬ್ 2ನೇ ಫಟ್ಟುಮಹಮ್ಮದ್ 3ನೇ ಅಬ್ದುಲ್‌ವಹಬ್ 4ನೇ ಜೈನೊಲಾಬದ್ದಿ, ಮೃತಪಟ್ಟ ಸದರೀ ಗವುಸ್‌ಸಾಬರಿಗೆ 1ನೇ ಅರ್ಜಿದಾರನು ತಮ್ಮನೆಂಬ 2—3—4ನೇ ಅರ್ಜಿದಾರರು ಮಕ್ಕಳು ಆಗಬೇಕೆಂಬ ಹಕ್ಕುದಾರೀ ಮೇಲೆ ಚಿತ್ರದುರ್ಗ ಸ್ಥಳದ ಮೇಲೆ ಕಂಡ ಅರ್ಜಿದಾರರು ಚಿತ್ರದುರ್ಗದಲ್ಲಿ ವಾಸಸ್ಥರಾಗಿ ಮೃತಪಟ್ಟ ಗವುಸ್‌ಸಾಬರ ಜೆಂದಗಿ ಬಗ್ಯಾಗಿ ಬರತಕ್ಕ 1000 ರೂಪಾಯಿ ಸಾಲಗಳನ್ನು ವಸೂಲ್ ಮಾಡುವದಕ್ಕೆ. 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ 1ನೇ ಜಮಾಲುದ್ದಿಸಾಬ್ 2ನೇ ಫಟ್ಟುಮಹಮ್ಮದ್ 3ನೇ ಅಬ್ದುಲ್‌ವಹಬ್ 4ನೇ ಜೈನೊಲಾಬದ್ದಿರ ಅರ್ಜೀಯನ್ನು 1890ನೇ ಇಸವಿ ಆಗಸ್ಟ್ ತಿಂಗಳು ತಾರೀಖು 6ರಲ್ಲು ಕೇಸ್ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದರೋಗ ಗವುಸ್‌ಸಾಬನ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1890ನೇ ಇಸವಿ ಜೂನ್ ತಿಂಗಳು 16ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕ್ರೈಸ್.
ಡಿಸ್ಟ್ರಿಕ್ಟ್ ಜಡ್ಜ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನ್‌ಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ಧರ್ಮಾರ್ಥ ವಾಗಿ ಗವರ್ಮೆಂಟ್ ಆಫಿಸರ್‌ಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಡುಗಳು ತೆಗದುಕೊಳ್ಳುವಯಾವ ಮನುಷ್ಯನಾದರೂ ಕಲ್ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರ ದೆಕೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 3—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ 7—4—0; ಬಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 14—0—0; ಬೊಟಾನಿಕಲ್ ಗಾರ್ಡನ್ ಸೂಪರ್‌ಟೆಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಒದಗಿಸಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಬಂದಕ್ಕೆ ರೂ. 4—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 9—4—0; ಬಂದು ಪೌಂವುಳ್ಳ ಡಬ್ಬಿಗೆ 17 ರೂ. 8 ಆಣೆ, ಈ ಔಷಧವು ಕಲ್ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ ವ ನೇಟಿವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ, ಸದರೀ ಕಿಮ್ಮತಿನೊಂದಿಗೆ ದರ 4 ಔನ್ಸ್ ತಗರದ ಡಬ್ಬಿಗೆ 4 ಆಣೆಯೂ, 8 ಔನ್ಸ್ ತಗರದ ಡಬ್ಬಿಗೆ 8 ಆಣೆ ಟಪ್ಪಾಲ್ ಹಾಸಲೂ, ಬಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.